# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 484 |
| 2. | ಸದಸ್ಯರ ಹೆಸರು | : | ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 04-02-2021 |
| 4. | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೆ.ಆರ್.ಪುರ ವಿಧಾನ ಸಭಾ ಕ್ಷೇತ್ರದಲ್ಲಿನ ವಾಡ್-56ರಲ್ಲಿ ಇರುವ ಬೆನ್ನಿಗಾನಹಳ್ಳಿ ಕೆರೆ ಕಲುಷಿತ ವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೆ.ಆರ್. ಪುರಂ ವಿಧಾನ ಸಭಾ ಕೆತ್ರದಲ್ಲಿನ ವಾರ್ಡ್-56 ರಲ್ಲಿ ಇರುವ ಬೆನ್ನಿಗಾನಹಳ್ಳಿ ಕೆರೆಯನ್ನು ಪಾಲಿಕೆಯ ವತಿಯಿಂದ ಅಭಿವೃದ್ಧಿಪಡಿಸಲಾಗಿದ್ದು, ಈ ಕೆರೆಗೆ ಹರಿದು ಬರುತ್ತಿದ್ದ ಕೊಳಚೆ ನೀರು ಕೆರೆಗೆ ಸೇರದಂತೆ ತಿರುವುಗಾಲುವೆಗಳನ್ನು ನಿರ್ಮಾಣ ಮಾಡಿ ಕೊಳಚೆ ನೀರನ್ನು ಹೊರಗೆ ಹಾಕಲಾಗುತ್ತಿದೆ. ಪ್ರಸ್ತುತ ಸದರಿ ಕೆರೆಗೆ ಯಾವುದೇ ಕೊಳಚೆ ನೀರು ಸೇರುತ್ತಿರುವುದಿಲ್ಲ. |
| ಆ | ಬೆನ್ನಿಗಾನಹಳ್ಳಿ ಕೆರೆಯನ್ನು ಹತ್ತು ತಿಂಗಳ ಹಿಂದೆ ಅಭಿವೃದ್ಧಿಪಡಿಸಿ ಸರಿಯಾದ ಸಮರ್ಪಕ ನಿರ್ವಹಣೆ ಮಾಡದೆ ಸರ್ಕಾರದ ಹಣವನ್ನು ಪೋಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆನ್ನಿಗಾನಹಳ್ಳಿ ಕೆರೆಯನ್ನು ಅಭಿವೃದ್ಧಿಪಡಿಸಿದ ನಂತರ ಕೆರೆ ನಿರ್ವಹಣೆ ಮಾಡಲು ನಿರ್ವಹಣೆ ಗುತ್ತಿಗೆದಾರರನ್ನು ನೇಮಿಸಿ ನಿರ್ವಹಣೆ ಕೆಲಸಗಳಾದ ಕಳೆ ತೆಗೆಯುವುದು, ಕಸ / ತ್ಯಾಜ್ಯಗಳನ್ನು ಶುಚಿಗೊಳಿಸುವುದು, ನೀರಿನಲ್ಲಿ ಬೆಳೆಯುವ ಗಿಡ ಗಂಟೆಗಳನ್ನು ತೆಗೆಯುವುದು ಇನ್ನಿತರೆ ನಿರ್ವಹಣೆ ಕೆಲಸಗಳನ್ನು ಕೈಗೊಳ್ಳಲಾಗುತ್ತದೆ. |
| ಇ | ಬೆನ್ನಿಗಾನಹಳ್ಳಿ ಕೆರೆ ಮತ್ತೆ ಅವಸಾನದ ಹಾದಿ ಹಿಡಿದಿದ್ದು, ಸದರಿ ಕೆರೆಯು ಮಳೆ ಬಂದಾಗ ಕೆರೆಯ ದಡದ ಮೇಲಿನ ಮಣ್ಣು ಕೆರೆಗೆ ಸೇರುತ್ತಿದ್ದು, ಕೆರೆಯ ಬದಿಯಲ್ಲಿರುವ ಕಲ್ಲು ಬೆಂಚುಗಳು ಮುರಿದು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆನ್ನಿಗಾನಹಳ್ಳಿ ಕೆರೆಯಲ್ಲಿ ಮುಖ್ಯ ಅಭಿವೃದ್ಧಿ ಕಾಮಗಾರಿಗಳಾದ ಹೂಳು ತೆಗೆಯುವುದು, ಕೊಳಚೆ ನೀರು ತಿರುವುಗಾಲುವೆ ನಿರ್ಮಾಣ, ತಂತಿ ಬೇಲಿ ನಿರ್ಮಾಣ, ಏರಿಯನ್ನು ಭದ್ರಪಡಿಸುವುದು, ವೆಟ್ ಲ್ಯಾಂಡ್ ನಿರ್ಮಾಣ, ಮುಂತಾದ ಕೆಲಸಗಳನ್ನು ಕೈಗೊಳ್ಳಲಾಗಿರುತ್ತದೆ. ಸದರಿ ಕೆರೆಯ ಪ್ರದೇಶದಲ್ಲಿ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ವತಿಯಿಂದ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕೈಗೊಳ್ಳಲು ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದ ಆದೇಶದ ಮೇರೆಗೆ 4175 ಚದರ ಮೀಟರ್ ಕೆರೆಯ ಮುಖ್ಯ ಏರಿ ಭಾಗವನ್ನು ಬಿಎಂಆರ್‌ಸಿಎಲ್ ಸಂಸ್ಥೆಗೆ ಹಸ್ತಾಂತರಿಸಲಾಗಿರುತ್ತದೆ. |

...2/-

| | | |
|---|---|---|
| ಈ | ಬಂದಿದ್ದಲ್ಲಿ, ಸದರಿ ಕೆರೆಯನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ವತಿಯಿಂದ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಪೂರ್ಣಗೊಳಿಸಿದ ನಂತರ ಕೆರೆಯ ಉಳಿದ ಪುನಶ್ಚೇತನ ಕಾಮಗಾರಿಗಳಾದ Repairs to boundary fencing, bund formation, bring back the original stability of main bund, desalting, resetting of revetment, pathway formation with gravel, kerb all round the pathway, water body fencing and a forestation, lakes furniture's, Children's play equipments etc., ಗಳನ್ನು ಕೂಡ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ವತಿಯಿಂದ ಕೈಗೊಳ್ಳುವ ಷರತ್ತಿನೊಂದಿಗೆ ಕೆರೆಯನ್ನು ಬಿಎಂಆರ್‌ಸಿಎಲ್‌ಗೆ ಹಸ್ತಾಂತರಿಸಲಾಗಿರುತ್ತದೆ. |

ಸಂಖ್ಯೆ: ನಅಇ 25 ಎಂಎನ್‌ವೈ 2021 (ಇ)

(ಬಿ.ಎಸ್. ಯಡಿಯೂರಪ್ಪ.)
ಮುಖ್ಯಮಂತ್ರಿ